## ಕರ್ನಾಟಕ ವಿಧಾನ ಪರಿಷತ್ತು

ಶ್ರೀ ಎಂ. ನಾಗರಾಜು ಮತ್ತು ಶ್ರೀ ಪ್ರಕಾಶ್ ಕೆ ರಾಥೋಡ್, ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ಮುಖ್ಯ ಸಂಚೇತಕರು ಇವರು ನಿಯಮ 330ರ ಮೇರೆಗೆ ಪ್ರಸ್ತಾಪಿಸಿರುವ ವಿಷಯಕ್ಕೆ ಸಂಬಂಧಿಸಿದಂತೆ ಮಾಹಿತಿ

ನಿಯಮ 330ರ ಮೇರೆಗೆ ಪ್ರಸ್ತಾಪಿಸಿರುವ ವಿಷಯ:-

"ದಿನಗೂಲಿ ಕಾರ್ಮಿಕರ ಆತ್ಮಹತ್ಯೆಗಳನ್ನು ತಡೆಗಟ್ಟಲು ಕ್ರಮಕೈಗೊಳ್ಳುವ ಕುರಿತು.

ಕಾರ್ಮಿಕ ಇಲಾಖೆಯ ಮಾಹಿತಿ:-

ದಿನಗೂಲಿ ಕಾರ್ಮಿಕರು ದಿನದ ವೇತನದ ಮೇಲೆ ಎಲ್ಲಾ ಕ್ಷೇತ್ರಗಳಲ್ಲಿ ಕೆಲಸ ಮಾಡುವವರಿದ್ದು, ಸೇವಾ ಭದ್ರತೆ, ಆರ್ಥಿಕ ಭದ್ರತೆ ಹಾಗೂ ಸಾಮಾಜಿಕ ಭದ್ರತಾ ಸೌಲಭ್ಯಗಳಿಂದ ವಂಚಿತರಾಗಿದ್ದು, ಅಂತಹ ದಿನಗೂಲಿ ಕಾರ್ಮಿಕರು ಆತ್ಮಹತ್ಯೆಗೆ ಶರಣಾಗುವ ಪರಿಸ್ಥಿತಿಗೆ ಪ್ರಮುಖ ಕಾರಣಗಳೆಂದರೆ ಪ್ರಧಾನವಾಗಿ ಸೇವಾ ಭದ್ರತೆ ಇಲ್ಲದಿರುವುದು, ಜೀವನ ನಿರ್ವಹಣೆಗೆ ಅಗತ್ಯವಾದ ವೇತನ ದೊರೆಯದಿರುವುದು ಹಾಗೂ ಇ.ಎಸ್.ಐ, ಪಿ.ಎಫ್ ಮುಂತಾದ ಸಾಮಾಜಿಕ ಭದ್ರತಾ ಸೌಲಭ್ಯಗಳು ದೊರೆಯದಿರುವುದು, ಅಲ್ಲದೆ ಪ್ರಸ್ತುತ ಸಂದರ್ಭದಲ್ಲಿ ಕೋವಿಡ್-19 ಪರಿಣಾಮದಿಂದ ಉದ್ಯೋಗ ಕಳೆದುಕೊಂಡು ನಿರುದ್ಯೋಗ ಸಮಸ್ಯೆಯನ್ನು ಎದುರಿಸುತ್ತಿರುವುದಾಗಿರುತ್ತದೆ.

ದಿನಗೂಲಿ ನೌಕರರಿಗೆ ಸಂಬಂಧಿಸಿದಂತೆ ಕಾರ್ಮಿಕ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾರ್ಮಿಕ ಕಾಯ್ದೆಗಳಡಿ ದೊರೆಯಬಹುದಾದ ಶಾಸನಾತ್ಮಕ ಸೌಲಭ್ಯಗಳು ಹಾಗೂ ಪರಿಹಾರಗಳ ವಿವರ ಈ ಕೆಳಕಂಡಂತಿದೆ.

- ಕನಿಷ್ಠ ವೇತನ ಕಾಯ್ದೆ, 1948ರಡಿ ವೇತನವನ್ನು ಮಾಸಿಕವಾಗಿ ಹಾಗೂ ದಿನಗೂಲಿ ಆಧಾರದ ಮೇಲೆ ನಿಗದಿಪಡಿಸಿದ್ದು, ನಿಗದಿತ ವೇತನವನ್ನು ಪಡೆಯಲು ಅರ್ಹರಿದ್ದು, ನಿಗದಿತ ವೇತನಕ್ಕಿಂತ ಕಡಿಮೆ ವೇತನ ನೀಡಿದಲ್ಲಿ ಅಂತಹ ಮಾಲೀಕರ ವಿರುದ್ಧ ಕ್ಲೇಮ್ ಅರ್ಜಿ ಸಲ್ಲಿಸಿ ಪರಿಹಾರ ಪಡೆಯಬಹುದಾಗಿದೆ.
- ಸಕಾಲದಲ್ಲಿ ವೇತನ ಪಾವತಿಸದಿದ್ದಲ್ಲಿ ಅಂತಹ ಮಾಲೀಕರ ವಿರುದ್ಧ ವೇತನ ಪಾವತಿ ಕಾಯ್ದೆ, 1936ರಡಿ ಕ್ಲೇಮ್ ಅರ್ಜಿ ಸಲ್ಲಿಸಿ ಪರಿಹಾರ ದೊರಕಿಸಿಕೊಡಲು ಅವಕಾಶವಿದೆ.
- ಉಪಧನ ಪಾವತಿ ಕಾಯ್ದೆ, 1972ರಡಿ ವರ್ಷದಲ್ಲಿ 240 ದಿನಗಳಂತೆ ನಿರಂತರ ಐದು ವರ್ಷಗಳ ಸೇವೆ ಸಲ್ಲಿಸಿದ ಕಾರ್ಮಿಕರಿಗೆ ಉಪಧನ ಪಡೆಯಲು ಅವಕಾಶವಿರುತ್ತದೆ.
- ಕೆಲಸದ ವೇಳೆ ಅಪಘಾತ ಸಂಭವಿಸಿ ಮರಣ ಹೊಂದಿದ ಅಥವಾ ಅಂಗ ಹೀನತೆ ಹೊಂದಿದ ಕಾರ್ಮಿಕರು ನೌಕರರ ಪರಿಹಾರ ಕಾಯ್ದೆ, 1923ರಡಿ ಪರಿಹಾರ ಪಡೆಯಲು ಅವಕಾಶವಿರುತ್ತದೆ.

ದಿನಗೂಲಿ ನೌಕರರು ಪ್ರಮುಖವಾಗಿ ಅಸಂಘಟಿತ ಕಾರ್ಮಿಕರಾಗಿದ್ದು, ಅಂತಹ ಅಸಂಘಟಿತ ಕಾರ್ಮಿಕರಿಗೆ ಸಂಬಂಧಿಸಿದಂತೆ ನೀತಿ ನಿಯಮಗಳನ್ನು ರೂಪಿಸಲು ಹಾಗೂ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸುವ ನಿಟ್ಟಿನಲ್ಲಿ ದತ್ತಾಂಶ ಸಂಗ್ರಹಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ಇ-ಶ್ರಮ್ ಪೋರ್ಟಲ್‌ನಲ್ಲಿ 379 ಅಸಂಘಟಿತ ವರ್ಗಗಳನ್ನು ಗುರುತಿಸಿ ಉಚಿತವಾಗಿ ನೋಂದಾಯಿಸಿ ಇ-ಶ್ರಮ್ ಕಾರ್ಡ್ ನೀಡಲಾಗುತ್ತಿದ್ದು, 16-59 ವರ್ಷ ವಯೋಮಾನದ ಇ.ಎಸ್.ಐ ಹಾಗೂ ಪಿ.ಎಫ್ ಹೊಂದಿರದ ಮತ್ತು ಆದಾಯ ತೆರಿಗೆ ಪಾವತಿದಾರರಲ್ಲದ ಅಸಂಘಟಿತ ಕಾರ್ಮಿಕರು ಇ-ಶ್ರಮ್ ನೋಂದಣಿಗೆ

..2

ಅರ್ಹರಾಗಿದ್ದು, ಅಂತಹ ಕಾರ್ಮಿಕರು ಕೇಂದ್ರ ಸರ್ಕಾರದ ಯೋಜನೆಯಾದ ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ (**PM-SBY**) ಪ್ರಯೋಜನ ಪಡೆಯಬಹುದು (ಅಪಘಾತ ವಿಮೆಯಾಗಿದ್ದು, ಅಪಘಾತದಿಂದ ಮರಣ ಹೊಂದಿದಲ್ಲಿ ಅಥವಾ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2 ಲಕ್ಷ ಹಾಗೂ ಭಾಗಶಃ ಅಂಗವೈಕಲ್ಯಕ್ಕೆ ರೂ.1 ಲಕ್ಷ ಪರಿಹಾರ). ಸರ್ಕಾರವು ಗುರುತಿಸಿರುವ ಎಲ್ಲಾ ವರ್ಗಗಳಲ್ಲೂ ದಿನಗೂಲಿ ನೌಕರರು ಕಂಡುಬರುವುದಿದ್ದು, ಆಯಾ ವರ್ಗದನ್ವಯ ಇ-ಶ್ರಮ್ ನೋಂದಣಿ ಮಾಡಿಸಿ ಕಾರ್ಡ್ ಪಡೆಯಲು ಅವಕಾಶವಿರುತ್ತದೆ.

**ಕಾಇ 503 ಎಲ್ಇಟಿ 2022**

(*ಅರಬೈಲ್ ಶಿವರಾಂ ಹೆಬ್ಬಾರ್*)
ಮಾನ್ಯ ಕಾರ್ಮಿಕ ಸಚಿವರು

C-58 330-43